Akashvani: Bangalore
National Bulletin In Kannada
06.02.2026 : 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

06.02.2026 : 7.35AM

********

**ಮುಖ್ಯಾಂಶಗಳು :**

1. ೯ನೇ ಆವೃತ್ತಿಯ ಪರೀಕ್ಷಾ ಪೆ ಚರ್ಚಾ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿರುವ ಪ್ರಧಾನಿ ನರೇಂದ್ರ ಮೋದಿ
2. ಇಂದು ಜಮ್ಮು ಮತ್ತು ಕಾಶ್ಮೀರದಲ್ಲಿ ಗಡಿ ಭದ್ರತೆಯನ್ನು ಪರಿಶೀಲಿಸಲಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ
3. ಮೇಘಾಲಯದ ಪೂರ್ವ ಜೈಂಟಿಯಾ ಹಿಲ್ಸ್ ಜಿಲ್ಲೆಯಲ್ಲಿ ಕಲ್ಲಿದ್ದಲು ಗಣಿ ಸ್ಫೋಟ; ೧೬ ಮಂದಿ ಸಾವು; ಗಣ್ಯರಿಂದ ಸಂತಾಪ
4. ಹತ್ತೊಂಭತ್ತು ವರ್ಷದೊಳಗಿನವರ ಏಕದಿನ ವಿಶ್ವಕಪ್ ಫೈನಲ್ ಪಂದ್ಯ; ಇಂಗ್ಲೆಂಡ್ ವಿರುದ್ಧ ಸೆಣಸಲಿರುವ ಭಾರತ

*************

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬೆಳಿಗ್ಗೆ ೯ನೇ ಆವೃತ್ತಿಯ ಪರೀಕ್ಷಾ ಪೆ ಚರ್ಚಾ ಕಾರ್ಯಕ್ರಮದಲ್ಲಿ ದೇಶಾದ್ಯಂತ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ವಾರ್ಷಿಕ ಕಾರ್ಯಕ್ರಮವನ್ನು ಬೆಳಿಗ್ಗೆ ೧೦ ಗಂಟೆಗೆ ವಿವಿಧ ವೇದಿಕೆಗಳಲ್ಲಿ ಪ್ರಸಾರ ಮಾಡಲಾಗುತ್ತದೆ. ೨೦೨೬ರ ಆವೃತ್ತಿಯು ವಿದ್ಯಾರ್ಥಿಗಳು ಪರೀಕ್ಷೆಯ ಸಮಯದಲ್ಲಿ ಒತ್ತಡರಹಿತವಾಗಿರಲು ಸಹಾಯ ಮಾಡುವುದು ಮತ್ತು ಕಲಿಕೆಯ ಮೇಲೆ ಬಲವಾದ ಗಮನವನ್ನು ಉತ್ತೇಜಿಸುವುದರ ಮೇಲೆ ಇದು ಕೇಂದ್ರೀಕರಿಸುತ್ತದೆ. "ಪರೀಕ್ಷಾ ಪೆ ಚರ್ಚಾ ರಾಷ್ಟ್ರವ್ಯಾಪಿ ಜನ ಆಂದೋಲನವಾಗಿ ವಿಕಸನಗೊಂಡಿದೆ, ಇದು ಮೈಗೌ ಪೋರ್ಟಲ್ ಮೂಲಕ ನೋಂದಾಯಿಸಿಕೊಳ್ಳುವ ೪.೫ ಕೋಟಿಗೂ ಹೆಚ್ಚು ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಪೋಷಕರ ಭಾಗವಹಿಸುವಿಕೆಗೆ ಸಾಕ್ಷಿಯಾಗಿದೆ.

ದೆಹಲಿಯ ಜೊತೆಗೆ, ಈ ಆವೃತ್ತಿಯು ತಮಿಳುನಾಡಿನ ಕೊಯಮತ್ತೂರು, ಛತ್ತೀಸ್‌ಗಢದ ರಾಯ್‌ಪುರ, ಗುಜರಾತ್‌ನ ದೇವ್‌ಮೋಗ್ರಾ ಮತ್ತು ಅಸ್ಸಾಂನ ಗುವಾಹಟಿಯನ್ನು ಒಳಗೊಂಡಿದೆ. ಇದು ಪ್ರಧಾನಿ ನರೇಂದ್ರ ಮೋದಿಯವರ ಯೂಟ್ಯೂಬ್ ಚಾನೆಲ್, ದೂರದರ್ಶನ ಮತ್ತು ಶಿಕ್ಷಣ ಸಚಿವಾಲಯದ ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿಯೂ ಪ್ರಸಾರವಾಗಲಿದೆ. ಈ ಕಾರ್ಯಕ್ರಮವು WAVES OTT,, ಅಮೆಜಾನ್ ಪ್ರೈಮ್ ವಿಡಿಯೋ, ಜಿಯೋ, ZEE5, ಸೋನಿ LIV ಮತ್ತು ಸ್ವಾಟಿಫೈನಲ್ಲಿಯೂ ನೇರ ಪ್ರಸಾರವಾಗಲಿದೆ. ಪರೀಕ್ಷಾ ಪೆ ಚರ್ಚಾ ಉಪಕ್ರಮವನ್ನು ಪ್ರಧಾನ ಮಂತ್ರಿಗಳು ಪರಿಕಲ್ಪನೆ ಮಾಡಿದ್ದಾರೆ ಮತ್ತು ಇದು ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ಕ್ಕೆ ಅನುಗುಣವಾಗಿದೆ. ಇದು ಆತ್ಮವಿಶ್ವಾಸ, ಸಕಾರಾತ್ಮಕತೆ ಮತ್ತು ಸಮಗ್ರ ಯೋಗಕ್ಷೇಮವನ್ನು ಬೆಳೆಸುವ ಮೂಲಕ ವಿದ್ಯಾರ್ಥಿಗಳ ಪರೀಕ್ಷಾ ಅನುಭವವನ್ನು ಮರುರೂಪಿಸುವ ಗುರಿಯನ್ನು ಹೊಂದಿದೆ ಮತ್ತು ಪರೀಕ್ಷಾ ಋತುವನ್ನು ಉತ್ಸವನ್ನಾಗಿ ಆಚರಿಸುತ್ತದೆ.

*************

ಕೇಂದ್ರ ಗೃಹ ಸಚಿವ ಅಮಿತ್ ಶಾ ಜಮ್ಮು ಮತ್ತು ಕಾಶ್ಮೀರದ ಗಡಿ ಭದ್ರತೆಯನ್ನು ಪರಿಶೀಲಿಸಲಿದ್ದಾರೆ ಮತ್ತು ಕೇಂದ್ರಾಡಳಿತ ಪ್ರದೇಶದ ಭದ್ರತಾ ಪರಿಸ್ಥಿತಿಯ ಕುರಿತು ಇಂದು ಜಮ್ಮುವಿನಲ್ಲಿ ಉನ್ನತ ಮಟ್ಟದ ಸಭೆ ನಡೆಸಲಿದ್ದಾರೆ. ಭೇಟಿಯ ಸಮಯದಲ್ಲಿ, ಒಟ್ಟಾರೆ ಕಾನೂನು ಮತ್ತು ಸುವ್ಯವಸ್ಥೆ ಪರಿಸ್ಥಿತಿಯನ್ನು ಮೌಲ್ಯಮಾಪನ ಮಾಡಲು ನಡೆಯುತ್ತಿರುವ ಅಭಿವೃದ್ಧಿ ಉಪಕ್ರಮಗಳ ಪ್ರಗತಿಯನ್ನು ನಿರ್ಣಯಿಸಲು ಅವರು ಭದ್ರತಾ ಪಡೆ ಮತ್ತು ಆಡಳಿತ ಅಧಿಕಾರಿಗಳನ್ನು ಭೇಟಿ ಮಾಡಲಿದ್ದಾರೆ. ಗಡಿಯಾಚೆಗಿನ ಒಳನುಸುಳುವಿಕೆಯನ್ನು ತಡೆಗಟ್ಟಲು ಗಡಿ ಭದ್ರತಾ ಪಡೆ ನಿಯೋಜಿಸಿರುವ ಹೊಸ ಗ್ಯಾಜೆಟ್‌ಗಳು ಮತ್ತು ಉಪಕರಣಗಳನ್ನು ಪರಿಶೀಲಿಸಲು ಗೃಹ ಸಚಿವರು ಇಂದು ಕಥುವಾ ಜಿಲ್ಲೆಯ ಹಿರಾನಗರದಲ್ಲಿರುವ ಅಂತಾರಾಷ್ಟ್ರೀಯ ಗಡಿಗೆ ಭೇಟಿ ನೀಡಲಿದ್ದಾರೆ. ಅವರು ಬೋಬಿಯಾ ಮತ್ತು ಗುರ್ನಮ್‌ನಲ್ಲಿರುವ ಬಿಎಸ್‌ಎಫ್ ಔಟ್‌ಪೋಸ್ಟ್‌ಗಳಿಗೆ ಭೇಟಿ ನೀಡಲಿದ್ದಾರೆ. ಇದಲ್ಲದೆ, ಸಚಿವರು ಜಮ್ಮುವಿನ ಲೋಕ ಭವನದಲ್ಲಿ ಹುತಾತ್ಮ ಸೈನಿಕರ ಕುಟುಂಬಗಳನ್ನು ಭೇಟಿ ಮಾಡಿ ನೇಮಕಾತಿ ಪತ್ರಗಳನ್ನು ಹಸ್ತಾಂತರಿಸಲಿದ್ದಾರೆ. ನಂತರ ಅವರು ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಲು ಉನ್ನತ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಕೇಂದ್ರ ಗೃಹ ಸಚಿವಾಲಯದ ಉನ್ನತ ಅಧಿಕಾರಿಗಳು,

ಅರೆಸೈನಿಕ ಪಡೆಗಳ ಮುಖ್ಯಸ್ಥರು ಮತ್ತು ಜಮ್ಮು ಮತ್ತು ಕಾಶ್ಮೀರದ ಗುಪ್ತಚರ ಸಂಸ್ಥೆಗಳ ಜೊತೆಗೆ ನಾಗರಿಕ ಮತ್ತು ಪೊಲೀಸ್ ಆಡಳಿತದ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಲಿದ್ದಾರೆ. ನಾಳೆ, ಗೃಹ ಸಚಿವರು ಶ್ರೀನಗರಕ್ಕೆ ಭೇಟಿ ನೀಡಲಿದ್ದು, ಜಮ್ಮು ಮತ್ತು ಕಾಶ್ಮೀರಕ್ಕಾಗಿ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ.

*************

ಮೇಘಾಲಯದಲ್ಲಿ, ಪೂರ್ವ ಜೈಂಟಿಯಾ ಹಿಲ್ಸ್ ಜಿಲ್ಲೆಯ ಥಾಂಗ್ಸ್ಕೊ ಪ್ರದೇಶದಲ್ಲಿ ನಿನ್ನೆ ಸಂಭವಿಸಿದ ಕಲ್ಲಿದ್ದಲು ಗಣಿ ಸ್ಫೋಟದಲ್ಲಿ ೧೮ ಜನರು ಸಾವನ್ನಪ್ಪಿದ್ದಾರೆ. ಗಣಿಗಾರಿಕೆ ಚಟುವಟಿಕೆಗಳಿಗೆ ಬಳಸಲಾಗುವ ಹೆಚ್ಚಿನ ತೀವ್ರತೆಯ ಡೈನಮೈಟ್ ಸ್ಫೋಟದಿಂದ ಸ್ಫೋಟ ಸಂಭವಿಸಿದೆ ಎಂದು ಪ್ರಾಥಮಿಕ ವರದಿಗಳಿಂದ ತಿಳಿದುಬಂದಿದೆ. ಈ ಘಟನೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ದುಃಖ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಈ ಘಟನೆಯನ್ನು ದುರದೃಷ್ಟಕರ ಎಂದು ಹೇಳಿದ್ದಾರೆ ಮತ್ತು ಗಾಯಗೊಂಡವರು ಬೇಗ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸಿದ್ದಾರೆ. ಉಪರಾಷ್ಟ್ರಪತಿಗಳು ತಮ್ಮ ಸಂತಾಪ ಸೂಚಿಸಿದ್ದಾರೆ ಮತ್ತು ಗಾಯಾಳುಗಳಿಗೆ ಬೇಗ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ. ಈ ಘಟನೆಯಲ್ಲಿ ಪ್ರಾಣ ಕಳೆದುಕೊಂಡವರಿಗೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ವ್ಯಕ್ತಪಡಿಸಿದ್ದಾರೆ. ಈ ಘಟನೆ ಅತ್ಯಂತ ದುಃಖಕರ ಎಂದು ಅವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಗಾಯಾಳುಗಳು ಬೇಗ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ. ಮೃತರ ಸಂಬಂಧಿಕರಿಗೆ ಪ್ರಧಾನಮಂತ್ರಿ ರಾಷ್ಟ್ರೀಯ ಪರಿಹಾರ ನಿಧಿಯಿಂದ ಎರಡು ಲಕ್ಷ ರೂಪಾಯಿಗಳ ಪರಿಹಾರ ನೀಡುವುದಾಗಿ ಅವರು ಘೋಷಿಸಿದ್ದಾರೆ. ಗಾಯಾಳುಗಳಿಗೆ ಐವತ್ತು ಸಾವಿರ ರೂಪಾಯಿಗಳನ್ನು ನೀಡಲಾಗುವುದು. ಮುಖ್ಯಮಂತ್ರಿ ಕಾನ್ರಾಡ್ ಸಂಗ್ಮಾ ಅವರು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದು, ಈ ಘಟನೆ ಬಗ್ಗೆ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ ಮತ್ತು ಗಣಿ ಸ್ಫೋಟದ ತನಿಖೆಗೆ ಆದೇಶಿಸಿದ್ದಾರೆ. ಈ ನಡುವೆ, ಘಟನಾ ಸ್ಥಳಕ್ಕೆ ಎರಡು ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ಪಡೆ ತಂಡಗಳು ತೆರಳುತ್ತಿವೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

*************

ಭಾರತವು ಜಾಗತಿಕ ಮಟ್ಟದಲ್ಲಿ ಸ್ಪರ್ಧೆಗೆ ಸಂಪೂರ್ಣವಾಗಿ ಸಜ್ಜಾಗಿದೆ. ಆತ್ಮವಿಶ್ವಾಸ ಮತ್ತು ನಿರ್ಣಾಯಕ ನೀತಿ ಸುಧಾರಣೆಗಳೊಂದಿಗೆ ಮೂರನೇ ಅತಿ ದೊಡ್ಡ ಆರ್ಥಿಕತೆಯಾಗುವತ್ತ ಭಾರತ ಸಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ರಾಜ್ಯಸಭೆಯಲ್ಲಿ ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲಿನ ಚರ್ಚೆಗೆ ಉತ್ತರಿಸಿದ ಅವರು, ಕೇಂದ್ರ ಸರ್ಕಾರವು ಸುಧಾರಣೆ, ಕಾರ್ಯಕ್ಷಮತೆ ಮತ್ತು ಪರಿವರ್ತನೆಯ ದೃಷ್ಟಿಕೋನದೊಂದಿಗೆ ಮುಂದುವರೆದಿದೆ ಎಂದು ತಿಳಿಸಿದರು. ಐರೋಪ್ಯ ಒಕ್ಕೂಟ, ಅಮೆರಿಕಾ ಸೇರಿದಂತೆ ಹಲವಾರು ದೇಶಗಳೊಂದಿಗೆ ಸಹಿ ಹಾಕಿದ ವ್ಯಾಪಾರ ಒಪ್ಪಂದದ ಕುರಿತು ಮಾತನಾಡಿದ ಪ್ರಧಾನಿ ಮೋದಿ, ಭಾರತ ೯ ದೇಶಗಳೊಂದಿಗೆ ವ್ಯಾಪಾರ ಒಪ್ಪಂದಗಳನ್ನು ಅಂತಿಮಗೊಳಿಸಿದೆ. ಇತ್ತೀಚೆಗೆ ಯುರೋಪಿಯನ್ ಒಕ್ಕೂಟದ ೨೭ ದೇಶಗಳೊಂದಿಗೆ ಒಪ್ಪಂದವನ್ನು ಪೂರ್ಣಗೊಳಿಸಿದೆ ಎಂದರು. ದೇಶವು ಬಲವಾದ ಉತ್ಪಾದನಾ ಪರಿಸರ ವ್ಯವಸ್ಥೆಯನ್ನು ನಿರ್ಮಿಸಿದೆ. ಯುವ ಪ್ರತಿಭಾನ್ವಿತರನ್ನು ದೇಶ ಹೊಂದಿದ್ದು, ಜಗತ್ತು ಭಾರತದತ್ತ ಭರವಸೆಯಿಂದ ನೋಡುತ್ತಿದೆ. ಜಗತ್ತು ನೂತನ ಜಾಗತಿಕ ಕ್ರಮದತ್ತ ವೇಗವಾಗಿ ಸಾಗುತ್ತಿದೆ. ಅನೇಕ ದೇಶಗಳೊಂದಿಗೆ ವಿಶ್ವಾಸಾರ್ಹ ಪಾಲುದಾರನಾಗಿ ಭಾರತ ಹೊರಹೊಮ್ಮಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

*************

ಭಾರತ-ಅಮೆರಿಕ ನಡುವಿನ ಐತಿಹಾಸಿಕ ವ್ಯಾಪಾರ ಒಪ್ಪಂದವು ಅಂತಿಮ ಹಂತದಲ್ಲಿದ್ದು, ಶೀಘ್ರದಲ್ಲೇ ಪೂರ್ಣಗೊಳ್ಳಲಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಈ ವ್ಯಾಪಾರ ಒಪ್ಪಂದವು ಭಾರತ-ಅಮೆರಿಕಾ ದ್ವಿಪಕ್ಷೀಯ ಸಂಬಂಧಗಳನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲಿದೆ. ಭಾರತದ ನಿರ್ಣಾಯಕ ಖನಿಜ ಸಹಕಾರವು ವೇಗವಾಗಿ ಮುಂದುವರೆಯುತ್ತಿದೆ ಎಂದು ಹೇಳಿದ್ದಾರೆ. ತಮ್ಮ ಇತ್ತೀಚಿನ ಅಮೆರಿಕಾ ಭೇಟಿಯು ಉತ್ಪಾದಕ ಮತ್ತು ಸಕಾರಾತ್ಮಕವಾಗಿತ್ತು ಎಂದು ಇದೇ ವೇಳೆ ಸಚಿವ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ.

*************

ಭಾರತೀಯ ರಿಸರ್ವ್ ಬ್ಯಾಂಕ್ ಇಂದು ತನ್ನ ದ್ವೈಮಾಸಿಕ ಹಣಕಾಸು ನೀತಿ ನಿರ್ಧಾರವನ್ನು ಪ್ರಕಟಿಸಲಿದೆ. ಗವರ್ನರ್ ಸಂಜಯ್ ಮಲ್ಹೋತ್ರಾ ನೇತೃತ್ವದ ಭಾರತೀಯ ರಿಸರ್ವ್ ಬ್ಯಾಂಕಿನ ಆರು ಸದಸ್ಯರ ಹಣಕಾಸು ನೀತಿ ಸಮಿತಿಯು ಮೊನ್ನೆಯಿಂದ ತನ್ನ ದ್ವೈಮಾಸಿಕ ಸಭೆಯನ್ನು ಆರಂಭಿಸಿದ್ದು, ಬಡ್ಡಿ ದರಗಳ ನಿಗದಿ ಕುರಿತು ಚರ್ಚೆ ನಡೆಸುತ್ತಿದೆ. ಅದು ತನ್ನ ನಿರ್ಧಾರವನ್ನು ಇಂದು ಪ್ರಕಟಿಸಲಿದೆ. ೨೦೨೫ರ ಆರಂಭದಿಂದ ಆರ್‌ಬಿಐ ಈಗಾಗಲೇ ರೆಪೊ ದರವನ್ನು ೧೨೫ ಮೂಲಾಂಶಗಳಷ್ಟು ಕಡಿತಗೊಳಿಸಿದೆ ಮತ್ತು ಹಣದುಬ್ಬರವು ಶೇಕಡ ೪ ಕ್ಕಿಂತ ಕಡಿಮೆಯಿದೆ ಎಂಬುದನ್ನು ಗಮನಿಸಿ, ಹೆಚ್ಚಿನ ಅರ್ಥಶಾಸ್ತ್ರಜ್ಞರು ಆರ್‌ಬಿಐ ಬಡ್ಡಿ ದರದಲ್ಲಿ ಯಥಾಸ್ಥಿತಿ ಕಾಯ್ದುಕೊಳ್ಳುತ್ತದೆ ಎಂದು ಅಂದಾಜಿಸಿದ್ದಾರೆ.

*************

ಜಿಂಬಾಬ್ವೆಯ ಹರಾರೆಯಲ್ಲಿ ನಡೆಯಲಿರುವ ಹತ್ತೊಂಭತ್ತು ವರ್ಷದೊಳಗಿನವರ  ವಿಶ್ವಕಪ್ ಕ್ರಿಕೆಟ್‌ನಲ್ಲಿಂದು ಭಾರತ ಮತ್ತು ಇಂಗ್ಲೆಂಡ್ ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೧ ಗಂಟೆಗೆ ಆರಂಭವಾಗಲಿದೆ. ಹರಾರೆಯಲ್ಲಿ ನಡೆದ ಎರಡನೇ ಸೆಮಿಫೈನಲ್‌ನಲ್ಲಿ ಭಾರತ ಅಫ್ಘಾನಿಸ್ತಾನವನ್ನು ಏಳು ವಿಕೆಟ್‌ಗಳಿಂದ ಸೋಲಿಸಿ ಫೈನಲ್ ತಲುಪಿತು. ಬುಲವಾಯೊದಲ್ಲಿ ನಡೆದ ಮೊದಲ ಸೆಮಿಫೈನಲ್‌ನಲ್ಲಿ ಹಾಲಿ ಚಾಂಪಿಯನ್ ಆಸ್ಟ್ರೇಲಿಯಾ ವಿರುದ್ಧ ೨೭ ರನ್‌ಗಳ ಜಯ ಸಾಧಿಸುವ ಮೂಲಕ ಇಂಗ್ಲೆಂಡ್ ಫೈನಲ್ ಪ್ರವೇಶಿಸಿತು. ಭಾರತ ತಂಡವು ಇಲ್ಲಿಯವರೆಗೆ ಟೂರ್ನಿಯಲ್ಲಿ ಅಜೇಯವಾಗಿ ಉಳಿದಿದೆ. ೨೦೦೦, ೨೦೦೮, ೨೦೧೨, ೨೦೧೮ ಮತ್ತು ೨೦೨೨ರಲ್ಲಿ ಐದು ಟ್ರೋಫಿಯನ್ನು ತನ್ನದಾಗಿಸಿಕೊಂಡಿತ್ತು.

*************

ವಡೋದರಾದ ಬಿಸಿಎ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಮಹಿಳಾ ಪ್ರೀಮಿಯರ್ ಲೀಗ್-ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಆರು ವಿಕೆಟ್‌ಗಳಿಂದ ಮಣಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ನಿಗದಿತ ೨೦ ಓವರ್‌ಗಳಲ್ಲಿ ೪ ವಿಕೆಟ್‌ಗಳ ನಷ್ಟಕ್ಕೆ ೨೦೩ ರನ್ ಮಾಡಿತು. ೨೦೪

ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ೧೯.೪ ಓವರ್‌ಗಳಲ್ಲಿ ೪ ವಿಕೆಟ್‌ಗಳ ನಷ್ಟಕ್ಕೆ ೨೦೪ ರನ್ ಗಳಿಸಿ ಗೆಲುವಿನ ನಗೆ ಬೀರಿತು.

******END******